KARNATAKA STATE BOARD
10
04 APR 2019
BANGALORE - 560 052

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2018-19ನೇ ಸಾಲಿನಲ್ಲಿ 03 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

****

**ಓದಲಾಗಿದೆ :** 1) ಸರ್ಕಾರಿ ಆದೇಶ ಸಂಖ್ಯೆ: MWD 139 CWF 77 ದಿನಾಂಕ:23-08-1979

2) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಸಚಿವರ ಟಿಪ್ಪಣಿ ಸಂಖ್ಯೆ :ಆನಸಗ್ರಾವ್ಯ/ಅಸಕ/ವಕ್ಫ್/ಹಜ್/1062/2019, ದಿನಾಂಕ:01-03-2019.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ Grant-in Aid Code ಅನ್ನು ಆಗಸ್ಟ್ 1979 ರಲ್ಲಿ ಜಾರಿಗೊಳಿಸಲಾಗಿದೆ.

ಮೇಲೆ (2) ರಲ್ಲಿ ಓದಲಾದ ಟಿಪ್ಪಣಿಯಲ್ಲಿ ಮಾನ್ಯ ವಕ್ಫ್ ಸಚಿವರು 03 ವಕ್ಫ್ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವಂತೆ ಸೂಚಿಸಿರುತ್ತಾರೆ.

ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 27 WGA 2018, ಬೆಂಗಳೂರು, ದಿನಾಂಕ: 02-03-2019

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2018-19ನೇ ಸಾಲಿನಲ್ಲಿ ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಲೆಕ್ಕ ಶೀರ್ಷಿಕೆ:2225-03-277-3-08(059) (ಯೋಜನೆ) ರಡಿಯಲ್ಲಿ ಮಂಜೂರು ಮಾಡಿರುವ ಅನುದಾನದಲ್ಲಿ ಈ ಕೆಳಕಂಡ ವಕ್ಫ್ ಸಂಸ್ಥೆಗಳಿಗೆ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನವನ್ನು ಮಂಜೂರು ಮಾಡಿ ಆದೇಶಿಸಿದೆ.

| ಕ್ರ.ಸಂ | ಸಂಸ್ಥೆಯ ಹೆಸರು | ಉದ್ದೇಶ | ಬಿಡುಗಡೆ ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಅನ್‌ಜುಮನ್-ಇ-ಫೈಜಾನ್-ಇ-ಹುಸೈನಿ (ಆಶೂರ್ ಖಾನ) ಶಿಯಾ, ತಿರುಪಾಲ್ಯೆಯಾಸ್ ಛತ್ರದ ಹಿಂಭಾಗ, ಟ್ಯಾಂಕ್ ಮೊಹಲ್ಲಾ ಶಿವಮೊಗ್ಗ) | ದುರಸ್ಥಿ ಮತ್ತು ನವೀಕರಣ | 10.00 |

| | | | |
|---|---|---|---|
| 2 | ಅನ್‌ಜುಮಾ-ಇ-ಇಮಾಮಿಯಾ, ರಿಚ್‌ಮಂಡ್ ರಸ್ತೆ, ಬೆಂಗಳೂರು. | ದುರಸ್ಥಿ ಮತ್ತು ನವೀಕರಣ | 20.00 |
| 3 | ಇದಾರಾ-ಇ-ಫೈಜುಲ್, ಇಸ್ಲಾಮ್ ಶಿಯಾ ಈಥಾನಾ ಆಶರಿ(ಶಿಯಾ) ಸರ್ವೇ ನಂ.51, ನಂ.4, ಮುನಿಸ್ವಾಮಿ ಗಾರ್ಡ್‌ನ್ ದಕ್ಷಿಣ ಬೀದಿ, ನೀಲಸಂದ್ರ, ಬೆಂಗಳೂರು. | ದುರಸ್ಥಿ ಮತ್ತು ನವೀಕರಣ | 20.00 |
| | | ಒಟ್ಟು | 50.00 |

(ಐವತ್ತು ಲಕ್ಷ ರೂಪಾಯಿಗಳು ಮಾತ್ರ)

**ಷರತ್ತುಗಳು:-**

1. ಅನುಬಂಧದಲ್ಲಿ ಸೂಚಿಸಿರುವ ಸಂಸ್ಥೆಗಳು ವಕ್ಫ್ ಮಂಡಳಿ ಹಾಗೂ ಅನುದಾನ ಸಂಹಿತೆಯ ನಿಯಮಗಳಂತೆ ಸದರಿ ಸಂಸ್ಥೆಗಳ ವಾರ್ಷಿಕ ಆದಾಯವನ್ನು ನೋಂದಣಿಯಾಗಿದೆಯೇ ಎಂಬುದರ ಬಗ್ಗೆ ನಿಗಧಿಪಡಿಸಿರುವ ದಾಖಲೆಗಳನ್ನು ಪರಿಶೀಲಿಸಿ ಹಾಗೂ ದೃಢಿಕೃತ ಅಭಿಯಂತರರಿಂದ ದೃಢೀಕರಿಸಿರುವ ಅಂದಾಜು ಪಟ್ಟಿ ಮತ್ತು ನಕ್ಷೆಯನ್ನು ಪಡೆದು ಅನುದಾನ ಬಿಡುಗಡೆ ಮಾಡತಕ್ಕದ್ದು. ನಿಯಮ ಉಲ್ಲಂಘನೆಯಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುವುದು ಹಾಗೂ ಶಿಸ್ತು ಕ್ರಮ ಜರುಗಿಸಲಾಗುವುದು.

2. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2225-03-277-3-08(059)" ವಕ್ಫ್ ಸಂಸ್ಥೆಗಳ ದುರಸ್ಥಿ ಹಾಗೂ ಜೀರ್ಣೋದ್ಧಾರಕ್ಕಾಗಿ (ಯೋಜನೆ) ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

3. ಮೇಲೆ ಓದಲಾದ (1)ರ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು Grant-in-Aid ನಲ್ಲಿರುವ ಸೂಚನೆಗಳನ್ನು ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆಗೊಳಿಸುವ ಮುನ್ನ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

4. ರೂ.5.00 ಲಕ್ಷಕ್ಕಿಂತ ಹೆಚ್ಚು ಅನುದಾನ ಮಂಜೂರು ಮಾಡಲಾಗಿರುವ ವಕ್ಫ್ ಸಂಸ್ಥೆಗಳಿಗೆ ಮೊದಲನೇ ಕಂತಿನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.

5. ರೂ.5.00ಲಕ್ಷಕ್ಕಿಂತ ಕಡಿಮೆ ಅನುದಾನ ಮಂಜೂರಾಗಿರುವ ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು.

.........3

6. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮತ್ತು ಜಿಲ್ಲಾ ವಕ್ಫ್ ಸಲಹಾ ಸಮಿತಿಯವರು ಆದೇಶ ಹೊರಡಿಸಿದ 2 ತಿಂಗಳ ಒಳಗಾಗಿ ಸದರಿ ಎಲ್ಲಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡುವುದು, ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಹಣ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಂಸ್ಥೆಗಳು ಕಡ್ಡಾಯವಾಗಿ ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 03 ಟಿಎಫ್‌ಪಿ 2018, ದಿನಾಂಕ:14.05.2018ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಕ್ರಂಭಾಷ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
4) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
6) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಗ್ರಾಹಕರ ವ್ಯವಹಾರಗಳು ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಹಾಗೂ ಹಜ್ ಸಚಿವರ ಆಪ್ತ ಕಾರ್ಯದರ್ಶಿಗಳು,
7) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ಬೆಂಗಳೂರು ನಗರ ಹಾಗೂ ಶಿವಮೊಗ್ಗ ಜಿಲ್ಲೆಗಳು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

~~~~~*****~~~~~~~
~~~~~